ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಬುಧವಾರ, ದಿನಾಂಕ: 09ನೇ ಡಿಸೆಂಬರ್, 2020

ಮಾಜಿ ಸೈನಿಕರಿಗೆ ಕೃಷಿ ಭೂಮಿ ಒದಗಿಸುವ ಬಗ್ಗೆ

ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

232 (198) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಡಗು ಜಿಲ್ಲೆಯಲ್ಲಿ ಕಳೆದ ಹತ್ತು ವರ್ಷಗಳಿಂದ ಎಷ್ಟು ಮಾಜಿ ಸೈನಿಕರಿಗೆ ಮಾಜಿ ಸೈನಿಕ ಕೋಟಾದಡಿಯಲ್ಲಿ ಭೂ ಮಂಜೂರಾತಿಯನ್ನು ನೀಡಲಾಗಿದೆ; (ಹೆಸರಿನೊಂದಿಗೆ ಪೂರ್ಣ ವಿವರಗಳನ್ನು ನೀಡುವುದು)

(ಆ) ಮಾಜಿ ಸೈನಿಕರ ಕೋಟಾದಡಿಯಲ್ಲಿ ಭೂ ಮಂಜೂರಾತಿಗಾಗಿ ಕಳೆದ ಹತ್ತು ವರ್ಷಗಳಿಂದ ಇಲ್ಲಿಯವರೆಗೆ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು; ಇದರಲ್ಲಿ ವಿಲೇವಾರಿಯಾದ ಅರ್ಜಿಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಇ) ಕೊಡಗು ಜಿಲ್ಲೆಯಲ್ಲಿ ಭೂಮಿ ಇಲ್ಲದ ಮಾಜಿ ಸೈನಿಕರಿಗೆ ಕೃಷಿ ಭೂಮಿಯನ್ನು ಹಂಚಿಕೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)